# ಕರ್ನಾಟಕ ಸರ್ಕಾರ

ಸಂಖ್ಯೆ: ಕಪಂರಾಅ/ಅಭಿವೃದ್ಧಿ/ 93/2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:04.11.2020

## ಸುತ್ತೋಲೆ

**ವಿಷಯ:** ಮಕ್ಕಳ ಹಕ್ಕುಗಳ ರಕ್ಷಣೆಗಾಗಿ 14 ನವೆಂಬರ್ 2020 ರಿಂದ 24 ಜನವರಿ 2021ರ ವರೆಗೆ, 10 ವಾರಗಳ "ಮಕ್ಕಳ ಸ್ನೇಹಿ ಗ್ರಾಮ ಪಂಚಾಯತಿ ಅಭಿಯಾನ" ಮತ್ತು ಗ್ರಾಮ ಪಂಚಾಯತಿಗಳಲ್ಲಿ "ಮಕ್ಕಳ ಹಕ್ಕುಗಳ ಗ್ರಾಮ ಸಭೆ" ನಡೆಸುವ ಕುರಿತು.

**ಉಲ್ಲೇಖ:** (1)ಕರ್ನಾಟಕ ಗ್ರಾಮಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993, ಅಧ್ಯಾಯ IIರ ಪ್ರಕರಣ 3(ಎಚ್)(2) )(i) ಮತ್ತು ಅಧ್ಯಾಯ IVರ ಪ್ರಕರಣ 61-ಎ

(2) ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 367 ಗ್ರಾಪಂಅ 2006 ದಿನಾಂಕ: 18-09-2006

(3) ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 638 ಗ್ರಾಪಂಅ 2007 ದಿನಾಂಕ 30-10-2007

(4) ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 837 ಗ್ರಾಪಂಅ 2019 ದಿನಾಂಕ 25-10-2019

---

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಸರ್ಕಾರವು ಮಕ್ಕಳ ಹಕ್ಕುಗಳ ರಕ್ಷಣೆ ಹಾಗೂ ಮಕ್ಕಳ ಭಾಗವಹಿಸುವಿಕೆ ಹಕ್ಕು ಹಿನ್ನೆಲೆಯಲ್ಲಿ ಗ್ರಾಮ ಪಂಚಾಯತಿಗಳಿಂದ ಮಕ್ಕಳ ಹಕ್ಕುಗಳ ಗ್ರಾಮ ಸಭೆಯನ್ನು ನಡೆಸಲು 2006ರಲ್ಲಿ ಪ್ರಮುಖವಾದ ನಿಲುವನ್ನು ತೆಗೆದುಕೊಂಡಿದೆ. ಇದು ವಿಶ್ವಸಂಸ್ಥೆಯ ಮಕ್ಕಳ ಹಕ್ಕುಗಳ ಒಡಂಬಡಿಕೆ 1989, ಭಾರತದ ಸಂವಿಧಾನದಲ್ಲಿ ಮಕ್ಕಳಿಗಿರುವ ಹಕ್ಕುಗಳನ್ನು ಮಾನ್ಯ ಮಾಡುವುದರಲ್ಲಿ ಮಹತ್ತರವಾದ ಹೆಜ್ಜೆಯಾಗಿದೆ. ಈ ಮೂಲಕ ಗ್ರಾಮೀಣಾಭಿವೃದ್ಧಿಯಲ್ಲಿ ಮಕ್ಕಳ ಭಾಗವಹಿಸುವಿಕೆಗೆ ಅವಕಾಶ ನೀಡಲಾಗಿದೆ. 2006ರಿಂದ ಪ್ರತಿ ವರ್ಷವೂ ಮಕ್ಕಳ ಹಕ್ಕುಗಳ ಗ್ರಾಮ ಸಭೆಯನ್ನು ನಡೆಸಿಕೊಂಡು ಬರಲಾಗುತ್ತಿದೆ. ಈ ನಿರ್ದೇಶನವು ಕರ್ನಾಟಕ ಗ್ರಾಮಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮದ ಅಧ್ಯಾಯ II ರ ಪ್ರಕರಣ 3(ಎಚ್)(2)(I)ರಲ್ಲಿ ಉಲ್ಲೇಖವಾಗಿರುವುದನ್ನು ಗಮನಿಸಬಹುದು (2015ರ ತಿದ್ದುಪಡಿಯಂತೆ).

ಭಾರತ ಸರ್ಕಾರವು, ವಿಶ್ವಸಂಸ್ಥೆಯ ಸುಸ್ಥಿರ ಅಭಿವೃದ್ಧಿ ಗುರಿಗಳು 2030ನ್ನು ಒಪ್ಪಿಕೊಂಡಿದ್ದು, ಮಕ್ಕಳ ಆರೋಗ್ಯ ರಕ್ಷಣೆ, ಶಿಕ್ಷಣ ಅಭಿವೃದ್ಧಿ ಸಾಧನೆ ಹಾಗೂ ಹಸಿವು, ತಾರತಮ್ಯ ಮತ್ತು ಶೋಷಣೆ ಕೊನೆಗೊಳಿಸುವುದಕ್ಕೆ ಬದ್ಧವಾಗಿದೆ. ಈ ಹಿನ್ನೆಲೆಯಲ್ಲಿ ಮಕ್ಕಳ ಪರಿಸ್ಥಿತಿಯನ್ನು ತಳಮಟ್ಟದಿಂದಲೇ ಗಮನಿಸಿ ಆವಶ್ಯಕ ಸುಧಾರಣಾ ಕ್ರಮಗಳನ್ನು ಕೈಗೊಳ್ಳುವುದು ಸರ್ಕಾರದ ಎಲ್ಲಾ ಇಲಾಖೆಗಳು, ಜನಪ್ರತಿನಿಧಿಗಳು ಮತ್ತು ಸಮುದಾಯದ ಜವಾಬ್ದಾರಿಯಾಗಿದೆ. ಮಕ್ಕಳ ರಕ್ಷಣೆÉ, ಸರ್ವಾಂಗೀಣ ಅಭಿವೃದ್ಧಿಗಾಗಿ ರಾಜ್ಯ ಹಾಗೂ ಕೇಂದ್ರ ಸರ್ಕಾರಗಳು ರೂಪಿಸಿರುವ ಹಲವು ಯೋಜನೆಗಳ ಹಿನ್ನೆಲೆಯಲ್ಲಿ ಮಕ್ಕಳ ಹಕ್ಕುಗಳನ್ನು ರಕ್ಷಿಸುವುದು ಎಲ್ಲರ ಕರ್ತವ್ಯವಾಗಿರುತ್ತದೆ. ವಿಶ್ವ ಸಂಸ್ಥೆಯ ಸುಸ್ಥಿರ ಅಭಿವೃದ್ಧಿ ಗುರಿಗಳು ಹಾಗೂ ಮಕ್ಕಳಿಗೆ ಸಂಬಂಧಿಸಿದ ಸಮಗ್ರ ಅಭಿವೃದ್ಧಿಯ ಅಂಶಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ 'ಮಕ್ಕಳ ಸ್ನೇಹಿ ಮತ್ತು ಮಕ್ಕಳ ಸುರಕ್ಷಿತ' ಪಂಚಾಯತಿಗಳನ್ನಾಗಿಸಲು 14 ನವಂಬರ್ 2020 ರಿಂದ 24 ಜನವರಿ 2021ರವೆಗೆ ಮಕ್ಕಳ,ವಿವಿಧ ಇಲಾಖೆಗಳ, ಇಲಾಖೇತರರ ಮತ್ತು ಸಮುದಾಯದ ಸಹಭಾಗಿತ್ವದಲ್ಲಿ 'ಮಕ್ಕಳ ಸ್ನೇಹಿ ಗ್ರಾಮ ಪಂಚಾಯತಿ ಅಭಿಯಾನ'ವನ್ನು ಹಮ್ಮಿಕೊಳ್ಳಲಾಗಿದೆ. ಗ್ರಾಮ ಪಂಚಾಯತಿಗಳಲ್ಲಿ ವಿವಿಧ ಭಾಗೀದಾರರ ಸಹಭಾಗಿತ್ವದಲ್ಲಿ ಪೂರ್ವ ಸಿದ್ಧತೆಗಾಗಿ ಸಭೆಯನ್ನು ನಡೆಸಿ 10 ವಾರಗಳ ಕಾರ್ಯಚಟುವಟಿಕೆಗಳ ವೇಳಾ ಪಟ್ಟಿ ಮತ್ತು ಸಾಧಿಸಬೇಕಾದ ಗುರಿಗಳ ಕುರಿತು ಕಾರ್ಯಯೋಜನೆ ತಯಾರಿಸಿ ಅಭಿಯಾನವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಆದೇಶಿಸಿದೆ.

1. **'ಮಕ್ಕಳ ಸ್ನೇಹಿ ಗ್ರಾಮ ಪಂಚಾಯತಿ ಅಭಿಯಾನ"ದ ಪೂರ್ವಬಾವಿ ಸಿದ್ದತೆ:**

• **14 ನವೆಂಬರ್ 2020 ರಿಂದ 24 ಜನವರಿ 2021ರವೆಗೆ "ಮಕ್ಕಳ ಸ್ನೇಹಿ ಗ್ರಾಮ ಪಂಚಾಯತಿ ಅಭಿಯಾನ"** ನಡೆಸುವ ಕುರಿತು ಪೂರ್ವಸಿದ್ದತೆಗಾಗಿ ಗ್ರಾಮ ಪಂಚಾಯತಿ ಮಟ್ಟದ, ಮಕ್ಕಳಿಗೆ ಸಂಬಂಧಿಸಿದ ಸಮಿತಿಗಳಾದ ಗ್ರಾಮ ಪಂಚಾಯತಿ ಶಿಕ್ಷಣ ಕಾರ್ಯಪಡೆ, ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ, ಬಾಲ ವಿಕಾಸ ಸಮಿತಿ, ಮಹಿಳಾ ಮತ್ತು ಮಕ್ಕಳ ರಕ್ಷಣೆ ಹಾಗೂ ಮಕ್ಕಳ ಸಾಗಾಟ ತಡೆ ನಿಗಾವಹಿಸುವ ಸಮಿತಿ, ಗ್ರಾಮ ಪಂಚಾಯತಿ ಗ್ರಂಥಾಲಯ, ಗ್ರಾಮ ಆರೋಗ್ಯ ಮತ್ತು ನೈರ್ಮಲ್ಯ ಸಮಿತಿಗಳು ಸೇರಿದಂತೆ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 (ತಿದ್ದುಪಡಿ 2015)ರ ಪ್ರಕರಣ 61-ಎರ ಅಡಿಯಲ್ಲಿ ಗ್ರಾಮ ಪಂಚಾಯತಿ ಮಟ್ಟದಲ್ಲಿ ರಚಿಸಲಾದ ವಿವಿಧ ಸಮಿತಿಯ ಪ್ರತಿನಿಧಿಗಳ ಮತ್ತು ವಿವಿಧ ಇಲಾಖೆ/ಇಲಾಖೇತರ ಭಾಗೀದಾರರ ಸಭೆಯನ್ನು 2020 ನವಂಬರ್ 10ರೊಳಗೆ ನಡೆಸುವುದು. ಈ ಸಭೆಯಲ್ಲಿ ಮಕ್ಕಳ ಭಾಗವಹಿಸುವಿಕೆಗೆ ಅವಕಾಶ ನೀಡಿ **14 ನವಂಬರ್ 2020 ರಿಂದ 24 ಜನವರಿ 2021ರವೆಗೆ** ಗ್ರಾಮ ಪಂಚಾಯತಿಯಿಂದ **"ಮಕ್ಕಳ ಸ್ನೇಹಿ ಗ್ರಾಮ ಪಂಚಾಯತಿ ಅಭಿಯಾನ"** ಕುರಿತು ಚರ್ಚಿಸಿ 10 ವಾರಗಳಲ್ಲಿ ಹಮ್ಮಿಕೊಳ್ಳಬೇಕಾದ ಕಾರ್ಯಕ್ರಮಗಳು, ಮಕ್ಕಳ ಸಮಗ್ರ ಅಭಿವೃದ್ಧಿಗೆ ಸಂಬಂಧಿಸಿದಂತೆ ಸಾಧಿಸಬೇಕಾದ ಗುರಿಗಳ (ಅನುಬಂಧ-ಎ ರಲ್ಲಿ ನಮೂದಿಸಲಾಗಿದೆ) ಕುರಿತು ತಾತ್ಕಾಲಿಕ ದಿನಾಂಕಗಳೊಂದಿಗೆ ವಿವರವಾದ ವೇಳಾ ಪಟ್ಟಿಯನ್ನು ಸಿದ್ದಪಡಿಸಿಕೊಳ್ಳುವುದು. ಕಾರ್ಯಕ್ರಮ/ ಚಟುವಟಿಕೆಗಳನ್ನು ರೂಪಿಸಿ ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳುವುದು.(ತಾತ್ಕಾಲಿಕ ಕರಡು ವೇಳಾಪಟ್ಟಿ ಲಗತ್ತಿಸಿದೆ.)

• **"ಮಕ್ಕಳ ಸ್ನೇಹಿ ಗ್ರಾಮ ಪಂಚಾಯತಿ ಅಭಿಯಾನ"**ದ ಅಂಗವಾಗಿ 10 ವಾರಗಳಲ್ಲಿ (ಪ್ರತಿವಾರ) ಈ ಕೆಳಗಿನ ಕಾರ್ಯಕ್ರಮ/ಚಟುವಟಿಕೆಗಳನ್ನು ಹಮ್ಮಿಕೊಳ್ಳಬಹುದಾಗಿದೆ.

- ಮಕ್ಕಳ ಜನನ ನೊಂದಣಿ ಮತ್ತು ಜನನ ಪ್ರಮಾಣ ಪತ್ರಗಳ ವಿತರಣೆ.
- ಪೌಷ್ಟಿಕ ಆಹಾರ ಕುರಿತು ಮಾರ್ಗದರ್ಶನ ಹಾಗೂ ಜಾಗೃತಿ.
- ಮಕ್ಕಳಿಗೆ ಚುಚ್ಚುಮದ್ದು ಪ್ರಾಮುಖ್ಯತೆ.
- ಮಕ್ಕಳ ಕ್ರೀಡಾಕೂಟ.
- ಮಕ್ಕಳ ಸಾಂಸ್ಕೃತಿಕ ಚಟುವಟಿಕೆಗಳು.
- ಮಕ್ಕಳಿಗೆ ಕಥೆ ಹೇಳುವ ಕಾರ್ಯಕ್ರಮಗಳು.
- ಸ್ಥಳೀಯ ಸಾಂಪ್ರದಾಯಿಕ ಆಟೋಟಗಳು/ಚಟುವಟಿಕೆಗಳು.
- ಜನಪದ ಗೀತೆಗಳು ಮತ್ತು ರಂಗಭೂಮಿ ಕಾರ್ಯಕ್ರಮಗಳು.
- ಮಾನಸಿಕ ಆರೋಗ್ಯ ಸಂಬಂಧಿತ ಕಾರ್ಯಕ್ರಮಗಳು.
- ಶೈಕ್ಷಣಿಕ ಮತ್ತು ವೃತ್ತಿಪರ ಮಾರ್ಗದರ್ಶನ ಕಾರ್ಯಕ್ರಮ.
- ಚಿತ್ರಕಲೆ ಕಾರ್ಯಕ್ರಮ.

• ಪೂರ್ವ ಸಿದ್ದತೆ ಸಭೆಯಲ್ಲಿ ಗ್ರಾಮ ಪಂಚಾಯತಿ ಶಿಕ್ಷಣ ಕಾರ್ಯಪಡೆಯಲ್ಲಿ ಇರುವ ಒಬ್ಬ ಸದಸ್ಯರನ್ನು 'ಪಂಚಾಯತಿ ಬಾಲ ಮಿತ್ರ' ಎಂದು ಘೋಷಿಸುವುದು ಮತ್ತು ಈ 'ಬಾಲ ಮಿತ್ರ' ಅಧಿಕಾರಿ/ಅಧಿಕಾರೇತರರಾಗಿರಬಹುದು. ಇವರು ಈ ಕೆಳಕಂಡ ಕಾರ್ಯಗಳನ್ನು ನಿರ್ವಹಿಸುವುದು.

- ಗ್ರಾಮ/ವಾರ್ಡ್ ಹಾಗೂ ಗ್ರಾಮ ಪಂಚಾಯತಿ ಮಟ್ಟದ ಮಕ್ಕಳ ಹಕ್ಕುಗಳ ಗ್ರಾಮ ಸಬೆ ನಡೆಯಲು ಅಧಿಕಾರಿ ಮತ್ತು ಅಧಿಕಾರೇತರರು ಹಾಗೂ ಗ್ರಾಮ ಪಂಚಾಯತಿಯೊಂದಿಗೆ ಸಮನ್ವಯ ಕಾರ್ಯ ಕೈಗೊಳ್ಳುವುದು.